RNU AIR DHARWAD

# March 29, 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

## ಮುಖ್ಯಾಂಶಗಳು

- **ರಾಜ್ಯದಲ್ಲಿ ಮೊದಲ** ಹಂತದ ಲೋಕಸಭಾ ಚುನಾವಣೆಯ 14 ಕ್ಷೇತ್ರಗಳಿಗೆ ಅಧಿಸೂಚನೆ ಪ್ರಕಟ.

- **ಲೋಕಸಭಾ ಚುನಾವಣೆ:** 14 ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆ ಆರಂಭ: ವಿವಿಧ ಅಭ್ಯರ್ಥಿಗಳಿಂದ ಉಮೇದುವಾರಿಕೆ.

- **ಮತದಾನದ ಮಹತ್ವ** ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ವಿವಿಧ ಜಿಲ್ಲೆಗಳ ಸ್ವೀಪ್ ಸಮಿತಿಗಳಿಂದ ವೈವಿಧ್ಯಮಯ ಕಾರ್ಯಕ್ರಮ

- **ಕಡಿಮೆ ಮತದಾನವಾದ** ಕ್ಷೇತ್ರಗಳಲ್ಲಿ ಮತದಾನ ಪ್ರಮಾಣ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಿ– ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಸೂಚನೆ.

## ಈಗ ವಾರ್ತೆಗಳ ವಿವರ

*******

**ರಾಜ್ಯದಲ್ಲಿ ಮೊದಲ** ಹಂತದ ಲೋಕಸಭಾ ಚುನಾವಣೆಗೆ ಅಧಿಸೂಚನೆ ಪ್ರಕಟಿಸಲಾಗಿದ್ದು, 14 ಕ್ಷೇತ್ರಗಳಿಗೆ ನಿನ್ನೆಯಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಂಡಿದೆ.

ಏಪ್ರಿಲ್ 4 ರವರೆಗೆ ನಾಮಪತ್ರ ಸಲ್ಲಿಸಬಹುದಾಗಿದ್ದು, 5 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ನಾಮಪತ್ರ ಹಿಂಪಡೆಯಲು ಏಪ್ರಿಲ್ 8 ಕೊನೆಯ ದಿನ. ಏಪ್ರಿಲ್ 26 ರಂದು ಈ ಹಂತದ ಚುನಾವಣೆ ನಡೆಯಲಿದ್ದು, ಎರಡೂ ಹಂತಗಳ ಮತ ಎಣಿಕೆ ಜೂನ್ 4 ರಂದು ನಡೆಯಲಿದೆ.

ಉಡುಪಿ–ಚಿಕ್ಕಮಗಳೂರು, ಹಾಸನ, ದಕ್ಷಿಣಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು–ಕೊಡಗು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಕೇಂದ್ರ, ಚಿಕ್ಕಬಳ್ಳಾಪುರ, ಕೋಲಾರ ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಮತದಾನ ನಡೆಯಲಿದೆ.

ಈ ನಡುವೆ ರಾಜ್ಯದಲ್ಲಿ ಬಿಜೆಪಿ, ಜೆಡಿಎಸ್ ಹಾಗೂ ಕಾಂಗ್ರೆಸ್ ಅಭ್ಯರ್ಥಿಗಳು ತಮ್ಮ, ತಮ್ಮ ಕ್ಷೇತ್ರಗಳಲ್ಲಿ ಮತಯಾಚನೆ ಆರಂಭಿಸಿದ್ದಾರೆ.

*******

**ಎರಡನೇ ಹಂತದ** ಲೋಕಸಭಾ ಚುನಾವಣೆಗೆ ಚುನಾವಣಾ ಆಯೋಗ ಅಧಿಕೃತ ಅಧಿಸೂಚನೆ ಹೊರಡಿಸಿದ್ದು, ಎರಡನೆ ಹಂತದಲ್ಲಿ 13 ರಾಜ್ಯಗಳ 89 ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ.

ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ಎಲ್ಲ ಲೋಕಸಭಾ ಕ್ಷೇತ್ರಗಳ ಚುನಾವಣಾ ಅಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿಗಳು ಅಧಿಸೂಚನೆ ಪ್ರಕಟಿಸಿದ್ದು, ತಕ್ಷಣದಿಂದಲೇ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ದಾಖಲಿಸಬಹುದಾಗಿದೆ.

ದ್ವಿತೀಯ ಹಂತದಲ್ಲಿ, ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳು ಸೇರಿದಂತೆ 89 ಕ್ಷೇತ್ರಗಳಿಗೆ ಮತದಾನ ನಡೆಯಲಿದೆ.

*******

**ಲೋಕಸಭಾ ಚುನಾವಣೆಗೆ** ನಾಮಪತ್ರ ಸಲ್ಲಿಕೆ ಆರಂಭಗೊಂಡಿದ್ದು, ವಿವಿಧ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ.

**ಹಾಸನ ಲೋಕಸಭಾ** ಕ್ಷೇತ್ರದ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಪ್ರಜ್ವಲ್ ರೇವಣ್ಣ ನಿನ್ನೆ ನಾಮಪತ್ರ ಸಲ್ಲಿಸಿದರು.

**ಬೆಂಗಳೂರು ಗ್ರಾಮಾಂತರ** ಲೋಕಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಡಿಕೆ ಸುರೇಶ್ ಸಾವಿರಾರು ಕಾರ್ಯಕರ್ತರೊಂದಿಗೆ ಮೆರವಣಿಗೆಯಲ್ಲಿ ಆಗಮಿಸಿ, ರಾಮನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಿದರು.

**ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ** ಪಕ್ಷೇತರ ಅಭ್ಯರ್ಥಿಯಾಗಿ ಎ.ಎಸ್.ಭಾಸ್ಕರ್ ನಿನ್ನೆ ನಾಮಪತ್ರ ಸಲ್ಲಿಸಿದರು.

**ಮೈಸೂರು– ಕೊಡಗು ಲೋಕಸಭಾ ಕ್ಷೇತ್ರದಲ್ಲಿ ನಿನ್ನೆ** ಸೋಷಿಯಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ ಪಕ್ಷದ ಸುನೀಲ್ ಟಿ.ಆರ್. ಹಾಗೂ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಎಂ.ಎಸ್.ಪ್ರವೀಣ್ ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಅವರಿಗೆ ನಾಮಪತ್ರ ಸಲ್ಲಿಸಿದರು.

*******

**ಮತದಾನದ ಮಹತ್ವ ಮತ್ತು** ಕಡ್ಡಾಯ ಮತದಾನ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ವಿವಿಧ ಜಿಲ್ಲೆಗಳಲ್ಲಿ ಸ್ವೀಪ್ ಸಮಿತಿ ವತಿಯಿಂದ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

**ಮತದಾನ ಮಹತ್ವ ಹಾಗೂ ತಪ್ಪದೇ** ಮತದಾನ ಮಾಡುವಂತೆ ಮತದಾರರನ್ನು ಪ್ರೇರೆಪಿಸುವ ನಿಟ್ಟಿನಲ್ಲಿ ಬಾಗಲಕೋಟೆಯಲ್ಲಿ ನಿನ್ನೆ ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿ ಷ್ಠಾಧಿಕಾರಿ ಅಮರನಾಥ ರೆಡ್ಡಿ ಹಾಗೂ ಜಿ.ಪಂ ಸಿಇಓ ಶಶಿಧರ ಕುರೇರ ಸೈಕಲ್ ಸವಾರಿ ಮಾಡುವ ಮೂಲಕ ಜಾಗೃತಿ ಮೂಡಿಸಿದರು.

ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬ ಅರ್ಹ ಮತದಾರರು ತಪ್ಪದೇ ಮತ್ತು ಕಡ್ಡಾಯವಾಗಿ ಮತದಾನದ ಹಕ್ಕು ಚಲಾಯಿಸಲು ಅರಿವು ಮೂಡಿಸುವ ಸಲುವಾಗಿ ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ಸ್ವೀಪ್ ಸಮಿತಿ ಜಿಲ್ಲಾಡಳಿತ ಭವನದ ಆವರಣದಲ್ಲಿ ರಂಗೋಲಿ ಬಿಡಿಸುವ ಸ್ಪರ್ಧೆ ಆಯೋಜಿಸಿದ್ದವು.

**ಕಳೆದ ಚುನಾವಣೆ ವೇಳೆ** ಕಡಿಮೆ ಮತದಾನವಾಗಿದ್ದ ಧಾರವಾಡ ಲೋಕಸಭಾ ಕ್ಷೇತ್ರದ ಮತ ಕೇಂದ್ರಗಳ ವ್ಯಾಪ್ತಿಯಲ್ಲಿ ನಿನ್ನೆ ಮತದಾರರ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಮಾನವ ಸರಪಳಿ ನಿರ್ಮಿಸಿ, ಮತದಾನದ ಮಹತ್ವ ಕುರಿತು ಘೋಷಣೆಗಳನ್ನು ಕೂಗುವ ಮೂಲಕ, ಮತ್ತು ಮನೆ ಮನೆಗೆ ತೆರಳಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.

**ಲೋಕಸಭಾ** ಚುನಾವಣೆಯಲ್ಲಿ ಮತದಾನ ಪ್ರಮಾಣಕ್ಕೆ ಹೆಚ್ಚಿಸಲು ಉತ್ತರಕನ್ನಡ ಜಿಲ್ಲೆಯಲ್ಲಿ ಜಿಲ್ಲಾಡಳಿತ ಹಾಗೂ ಸ್ವೀಪ್ ಸಮಿತಿ ವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಹಳಿಯಾಳದಲ್ಲಿ ಪ್ರಖ್ಯಾತ ಗೊಂಬೆಯಾಟ ಕಲಾವಿದ ಸಿದ್ದಪ್ಪ ಬಿರಾದಾರ ಮತ್ತು ತಂಡದವರು ಗೊಂಬೆಯಾಟದ ಮೂಲಕ ಮತದಾನದ ಮಹತ್ವ ತಿಳಿಸಿದರು.

**ಚಾಮರಾಜನಗರ ಜಿಲ್ಲಾ ಸ್ವೀಪ್** ಸಮಿತಿ ವತಿಯಿಂದ ಚಾಮರಾಜನಗರದ ಮಾಂಗಲ್ಯಂ ಕಲ್ಯಾಣ ಮಂಟಪದಲ್ಲಿ ನಿನ್ನೆ ಮದುವೆ ಸಮಾರಂಭವೊಂದರಲ್ಲಿ ನೂತನ ವಧು-ವರರು ಹಾಗೂ ನೆರೆದಿದ್ದ ಸಾವಿರಾರು ಜನರಿಗೆ ಲೋಕಸಭಾ ಚುನಾವಣಾ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.

*******

**ಮಂಡ್ಯ ಲೋಕಸಭಾ** ಕ್ಷೇತ್ರದಲ್ಲಿ ನಿನ್ನೆ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತರ ಸಭೆ ಆಯೋಜಿಸಲಾಗಿತ್ತು. ಸಭೆಯಲ್ಲಿ ಚುನಾವಣಾ ಕಾರ್ಯತಂತ್ರ ಕುರಿತು ಚರ್ಚೆ ನಡೆಸಲಾಯಿತು.

ಸಭೆಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಜ್ಯದಲ್ಲಿ ಉಂಟಾಗಿರುವ ಬರಗಾಲವನ್ನು ನಿರ್ವಹಿಸುವಲ್ಲಿ ಕಾಂಗ್ರೆಸ್ ಸರ್ಕಾರ ವಿಫಲವಾಗಿದೆ. ರೈತರ ಸಂಕ ಷ್ಟವನ್ನು ಆಲಿಸುವಲ್ಲಿ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿದರು.

ಜೆಡಿಎಸ್ ವರಿ ್ಠ ಎಚ್.ಡಿ.ಕುಮಾರಸ್ವಾಮಿ ಮಾತನಾಡಿ, ರಾಜ್ಯಕ್ಕೆ ಸಂಬಂಧಿಸಿದ ಹಲವು ವಿಷಯಗಳನ್ನು ಕಾಂಗ್ರೆಸ್ ರಾಜಕೀಯಗೊಳಿಸುತ್ತಿದೆ. ಅನಗತ್ಯವಾಗಿ ಕೇಂದ್ರ ಸರ್ಕಾರದೊಂದಿಗೆ ಸಂಘರ್ಷಕ್ಕೆ ಮುಂದಾಗಿದೆ. ದೇಶದ ಒಕ್ಕೂಟ ವ್ಯವಸ್ಥೆಯನ್ನು ಕಾಂಗ್ರೆಸ್ ಪಾಲಿಸಬೇಕು ಎಂದರು.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಕಳೆದ ಬಾರಿಯ** ಚುನಾವಣೆಯಲ್ಲಿ ಕಡಿಮೆ ಮತದಾನವಾದ ಪ್ರದೇಶಗಳಲ್ಲಿನ ನ್ಯೂನ್ಯತೆಗಳನ್ನು ಮನಗಂಡು ಅವುಗಳ ಪರಿಹಾರಕ್ಕೆ ಸೂಕ್ತ ಕ್ರಮದೊಂದಿಗೆ ಈ ಬಾರಿ ಮತದಾನ ಹೆಚ್ಚಳಕ್ಕೆ ಮುಂದಾಗಬೇಕು ಎಂದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಸೂಚಿಸಿದ್ದಾರೆ.

ದಾವಣಗೆರೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಡೆದ ಜಿಲ್ಲಾ ಸ್ವೀಪ್ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ 2019 ರ ಚುನಾವಣೆಯಲ್ಲಿ ಶೇಕಡಾ 72.96 ರ ್ಟು ಮತದಾನವಾಗಿತ್ತು. ಕಡಿಮೆ ಮತದಾನವಾದ ಪ್ರದೇಶಗಳಲ್ಲಿ ಜಾಗೃತಿ ಕಾರ್ಯಕ್ರಮದ ಜೊತೆಗೆ ಕಡಿಮೆ ಮತದಾನಕ್ಕೆ ಯಾವೆಲ್ಲ ಅಂಶಗಳು ಕಾರಣವಾಗಿವೆ ಎಂಬುದನ್ನು ಗುರುತಿಸಬೇಕು. ಇದಕ್ಕೆ ಪರಿಹಾರೋಪಾಯಗಳನ್ನು ಕಂಡುಕೊಂಡು ಈ ವ ್ಷ ಮತದಾನ ಹೆಚ್ಚಳಕ್ಕೆ ಮುಂದಾಗಬೇಕು ಎಂದು ಸೂಚನೆ ನೀಡಿದರು.

*******

**ನಿ ್ಪಕ್ಷಪಾತ, ಪಾರದರ್ಶಕ ಹಾಗೂ ನ್ಯಾಯ ಸಮ್ಮತ** ಚುನಾವಣೆ ನಡೆಸಲು ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಹಾಗೂ ಬಾಗಲಕೋಟೆ ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಸಭಾಂಗಣದಲ್ಲಿ ನಿನ್ನೆ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಚುನಾವಣಾ ಆಯೋಗದ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಜೊತೆಗೆ ಚುನಾವಣೆಗೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಗಳಿಗೆ ಅವರ ಸಮಿತಿಯ ಹೊಣೆಗಾರಿಕೆ ಮತ್ತು ತಮ್ಮ ಜವಾಬ್ದಾರಿಗಳ ಕುರಿತು ಸಂಪೂರ್ಣ ಅರಿವಿರಬೇಕು. ಅಂದಾಗ ಮಾತ್ರ ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತದೆ ಎಂದರು.

*******

**ಲೋಕಸಭಾ ಚುನಾವಣೆ** ಪ್ರಜಾಪ್ರಭುತ್ವದ ಅತಿದೊಡ್ಡ ಹಬ್ಬವಾಗಿದ್ದು, ಪ್ರತಿಯೊಬ್ಬ ಮತದಾರರು ತಪ್ಪದೆ ಮತದಾನ ಮಾಡುವ ಮೂಲಕ ಚುನಾವಣಾ ಹಬ್ಬದ ಸಂಭ್ರಮದಲ್ಲಿ ಭಾಗವಹಿಸಬೇಕು ಎಂದು ಹಾವೇರಿ ತಾಲ್ಲೂಕು ಪಂಚಾಯಿತಿ ಸ್ವೀಪ್ ಸಮಿತಿ ಅಧ್ಯಕ್ಷ ಭರತ್ ಹೆಗಡೆ ಹೇಳಿದ್ದಾರೆ.

ಹಾವೇರಿ ತಾಲ್ಲೂಕು ಪಂಚಾಯಿತಿ, ಸ್ವೀಪ್ ಸಮಿತಿ ವತಿಯಿಂದ ತಾಲ್ಲೂಕಿನ ಗಾಂಧಿಪುರ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಲಿ ನಿನ್ನೆ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿ ಅವರು ಮಾತನಾಡಿದರು.

ದೇಶದ ಅಭಿವೃದ್ಧಿ ಕುರಿತಾದ ಪರಿಕಲ್ಪನೆಗಳು ಸಾಕಾರಗೊಳ್ಳಲು ಮತದಾನದ ಹಕ್ಕು ಚಲಾಯಿಸುವುದು ಅವಶ್ಯ. ಕಾಲೇಜು ವಿದ್ಯಾರ್ಥಿಗಳು ಮತ್ತು ಯುವಕರು ಮತದಾನದ ದಿನ ತಪ್ಪದೆ ಮತಗಟ್ಟೆಗೆ ತೆರಳಿ ಮತದಾನ ಮಾಡಬೇಕು. ಮತದಾರರು ಯಾವುದೇ ಆಸೆ ಆಮಿ ´ಗಳಿಗೆ ಒಳಗಾಗಬಾರದು ಎಂದು ಹೇಳಿದರು.

*******

**ಧಾರವಾಡ ಜಿಲ್ಲೆಯಲ್ಲಿ ಕುಡಿಯುವ** ಇದುವರೆಗೆ ನೀರಿನ ಕೊರತೆ ಅಥವಾ ಜಾನುವಾರುಗಳಿಗೆ ಮೇವು ಪೂರೈಕೆಯಲ್ಲಿ ವ್ಯತ್ಯೆಯವಾಗಿಲ್ಲ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ತಿಳಿಸಿದ್ದಾರೆ.

ಧಾರವಾಡದಲ್ಲಿ ನಿನ್ನೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಬರ ಪರಿಹಾರ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಿ, ಮಾತನಾಡಿದ ಅವರು, ಜಿಲ್ಲೆಯ ವಿವಿಧೆಡೆ ಬೇಡಿಕೆಗೆ ಅನುಗುಣವಾಗಿ ಆರು ಸ್ಥಳಗಳಲ್ಲಿ ಮೇವು ಬ್ಯಾಂಕುಗಳನ್ನು ತೆರೆಯಲಾಗಿದೆ. ರೈತರಿಗೆ ಈ ಕುರಿತು ಮಾಹಿತಿ ನೀಡಿದ್ದು, ರೈತರು ಅಗತ್ಯವಿದ್ದಾಗ ಮೇವು ಬ್ಯಾಂಕಿನಿಂದ ನಿಯಮಾನುಸಾರ ಮೇವು ಪಡೆಯಬಹುದಾಗಿದೆ ಎಂದರು.

ಕುಡಿಯುವ ನೀರಿನ ಕೊರತೆ ಉಂಟಾಗಬಹುದು ಎಂದು ಈ ಹಿಂದೆ ಗುರುತಿಸಿದ್ದ 153 ಗ್ರಾಮಗಳಿಗೆ ಅಗತ್ಯವಿದ್ದಾಗ ತಕ್ಷಣ ನೀರು ಪೂರೈಕೆ ಮಾಡಲು ಆಯಾ ಗ್ರಾಮ ವ್ಯಾಪ್ತಿಯಲ್ಲಿರುವ 390 ಖಾಸಗಿ ಬೋರವೆಲ್‌ಗಳನ್ನು ಗುರುತಿಸಿ, ಬೋರವೆಲ್ ಮಾಲೀಕರಿಂದ ಒಪ್ಪಿಗೆ ಪತ್ರ ಸಹ ಪಡೆಯಲಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

*******

**ಜನ, ಜಾನುವಾರಗಳ** ಕುಡಿಯುವ ಉದ್ದೇಶಕ್ಕಾಗಿ ನಾರಾಯಣಪುರ ಜಲಾಶಯದಿಂದ ಭೀಮಾನದಿಗೆ ಒಂದು ಟಿಎಂಸಿ ನೀರು ಬಿಡುಗಡೆ ಮಾಡಲಾಗುತ್ತಿರುವುದರಿಂದ ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ನಿನ್ನೆ ಇಂಡಿ ತಾಲೂಕಿನ ಹಿಂಗಣಿ ಬ್ಯಾರೆಜ್‌ಗೆ ಭೇಟಿ ನೀಡಿ ಪರಿಶೀಲಿಸಿದರು.

ಕುಡಿಯುವ ಉದ್ದೇಶಕ್ಕಾಗಿ ನೀರನ್ನು ಹರಿಸಲಾಗುತ್ತಿರುವುದರಿಂದ ಯಾವುದೇ ಕಾರಣಕ್ಕೂ ನೀರು ಪೋಲಾಗದಂತೆ ಹಾಗೂ ಅಂತಿಮ ಸೂಚಿತ ಪ್ರದೇಶಗಳಿಗೆ ಕುಡಿಯುವ ನೀರು ತಲುಪುವಂತೆ ಆದ್ಯತೆ ನೀಡಿ ಅಧಿಕಾರಿಗಳು ಕಾರ್ಯನ್ಮೋಮುಖರಾಗಬೇಕು ಎಂದು ಸೂಚಿಸಿದರು.

*******

**ಇಂದು ಗುಡ್** ಫ್ರೈಡೇ ಅಂದರೆ ಶುಭ ಶುಕ್ರವಾರ. ಕ್ರೈಸ್ತರಿಗೆ ಒಂದು ಪವಿತ್ರವಾದ ದಿನ. ಮಾನವ ಕುಲದ ಏಳಿಗೆಗಾಗಿ ಕಿಸ್ತನು ನೀಡಿರುವ ಬಲಿದಾನ ನೆನೆಯಲು ಗುಡ್ ಫ್ರೈಡೇ ಆಚರಿಸಲಾಗುತ್ತದೆ.

ಈ ದಿನದಂದು ಕ್ರೈಸ್ತ ಧರ್ಮ ಬಂಧುಗಳು ಉಪವಾಸ ಮಾಡಿ, ಕ್ರಿಸ್ತನಿಗಾಗಿ ಪ್ರಾರ್ಥಿಸುತ್ತಾರೆ. ಕ್ರೈಸ್ತ ಸಮುದಾಯದವರು ಗುಡ್ ಫ್ರೈಡೆಯನ್ನು ತುಂಬಾ ವಿಶೇ ’ ದಿನವೆಂದು ಪರಿಗಣಿಸುತ್ತಾರೆ.

***********

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ರಾಜ್ಯದಲ್ಲಿ ಮೊದಲ** ಹಂತದ ಲೋಕಸಭಾ ಚುನಾವಣೆಯ 14 ಕ್ಷೇತ್ರಗಳಿಗೆ ಅಧಿಸೂಚನೆ ಪ್ರಕಟ:

**ಲೋಕಸಭಾ ಚುನಾವಣೆ:** 14 ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆ ಆರಂಭ: ವಿವಿಧ ಅಭ್ಯರ್ಥಿಗಳಿಂದ ಉಮೇದುವಾರಿಕೆ.

**ಮತದಾನದ ಮಹತ್ವ** ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ವಿವಿಧ ಜಿಲ್ಲೆಗಳ ಸ್ವೀಪ್ ಸಮಿತಿಗಳಿಂದ ವೈವಿಧ್ಯಮಯ ಕಾರ್ಯಕ್ರಮ

**ಕಡಿಮೆ ಮತದಾನವಾದ** ಕ್ಷೇತ್ರಗಳಲ್ಲಿ ಮತದಾನ ಪ್ರಮಾಣ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಿ– ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಸೂಚನೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ**

***** END *****